# ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ (ನಿ)

(ಕರ್ನಾಟಕ ಸರ್ಕಾರದ ಉದ್ಯಮ)

ನಂ.2, ಕುಶಾಲ್‌ಎಮರಾಲ್ಡ್, ಗಾಂಧಿಭವನ ಎದುರು, ಕುಮಾರ ಪಾರ್ಕ್ ಪೂರ್ವ, ಬೆಂಗಳೂರು–560001.
E-Mail: mdupparn@gmail.com | Phone: 080 22252555, Helpline No: 7026288888
www.uppardvelopment.karnataka.gov.in

ಸಂಖ್ಯೆ:ಕಉಅನಿನಿ/ಸಿ.ಆರ್–08/2022–23 ದಿನಾಂಕ:29.06.2022

## ಪ್ರಕಟಣೆ

## ಸುವಿಧಾ ತಂತ್ರಾಂಶದ ಮುಖಾಂತರ ಆನ್‌ಲೈನ್ ಅರ್ಜಿ ಸಲ್ಲಿಕೆಗಾಗಿ ಆಹ್ವಾನ

2022–23ನೇ ಸಾಲಿನಲ್ಲಿ ನಿಗಮದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಪ್ರವರ್ಗ–1ರಡಿಯಲ್ಲಿ ಬರುವ ಕ್ರಮ ಸಂಖ್ಯೆ: 53(ಎ) ಯಿಂದ 53(ವಿ) ವರೆಗಿನ ಉಪ್ಪಾರ ಮತ್ತು ಇದರ ಉಪಜಾತಿಗೆ ಸೇರಿದ ಜನರ ಆರ್ಥಿಕ ಅಭಿವೃದ್ಧಿಗಾಗಿ ಸಾಲ ಮತ್ತು ಸಹಾಯಧನ ಸೌಲಭ್ಯ ಪಡೆಯಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

### ಯೋಜನೆಗಳ ವಿವರ

1. ಸ್ವಯಂ ಉದ್ಯೋಗ ನೇರ ಸಾಲ ಯೋಜನೆ
2. 2022–23ನೇ ಸಾಲಿನ **"ಅರಿವು ಶೈಕ್ಷಣಿಕ ಸಾಲ"** (ನವೀಕರಣ) (2019–20ನೇ ಸಾಲಿನ 4ನೇ ಕಂತು ಹಾಗೂ 2020–21ನೇ ಸಾಲಿನ 3 ಕಂತು)

### ಸಾಮಾನ್ಯ ಅರ್ಹತೆಗಳು ಮತ್ತು ನಿಬಂಧನೆಗಳು

- ಅರ್ಜಿದಾರರುಕರ್ನಾಟಕರಾಜ್ಯದಖಾಯಂ ನಿವಾಸಿಯಾಗಿರಬೇಕು.
- ಕೇಂದ್ರ ಆಧಾರ್ ಅಧಿನಿಯಮ, 2016 ಸೆಕ್ಷನ್ (7)ರಡಿ ಆಧಾರ್ ಕಾರ್ಡ್ ಕಡ್ಡಾಯವಾಗಿರುತ್ತದೆ. ಅರ್ಜಿದಾರರ ಹೆಸರು, ಆಧಾರ್ ಕಾರ್ಡ್, ಜಾತಿ / ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಖಾತೆಗಳಲ್ಲಿ ಹೊಂದಾಣಿಕೆ ಆಗಿರಬೇಕು.
- ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ.
- ನಿಗಮದ / ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು.
- ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು.
- ಸರ್ಕಾರ/ ನಿಗಮವು ಕಾಲಕಾಲಕ್ಕೆ ವಿಧಿಸುವ ಇನ್ನಿತರ ಅರ್ಹತೆ / ನಿಬಂಧನೆಗಳನ್ನು ಹೊಂದಿದವರಾಗಿರಬೇಕು.

### ವಿಶೇಷ ಸೂಚನೆ

- ಅನುದಾನದ ಲಭ್ಯತೆಗೆ ಅನುಗುಣವಾಗಿ ಯೋಜನೆಯನ್ನು / ಸೌಲಭ್ಯವನ್ನು ಜಾರಿಗೊಳಿಸುವುದು.
- ಯೋಜನೆಗಳ ಮಾರ್ಗ ಸೂಚಿಯಲ್ಲಿ ಯಾವುದೇ ಬದಲಾವಣೆಗಳಾದಲ್ಲಿ, ಆ ದಿನಾಂಕದಿಂದ ಜಾರಿಗೆ ಬರುವಂತೆ ಯೋಜನೆಯನ್ನು ಜಾರಿಗೊಳಿಸಲಾಗುವುದು.
- Suvidha.karnataka.gov.in ತಂತ್ರಾಂಶದ ಮೂಲಕ ಮಾತ್ರವೇ ಅರ್ಜಿಗಳನ್ನು ಸಲ್ಲಿಸಬೇಕು.
- ಹೆಚ್ಚಿನ ಮಾಹಿತಿಯನ್ನು ಸಂಬಂಧಪಟ್ಟ ಜಿಲ್ಲೆಗಳಲ್ಲಿರುವ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ / ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ / ನಿಗಮದ ವೆಬ್‌ಸೈಟ್ http://upparadevelopment.karnataka.gov.in ರಲ್ಲಿ ಪಡೆಯಬಹುದಾಗಿದೆ.
- ನಿಗಮದ ಸಹಾಯವಾಣಿ(Helpline) ಸಂಖ್ಯೆ:7026288888ಗೆ **ಬೆಳಿಗ್ಗೆ 10:00 ರಿಂದ ಸಂಜೆ 5:30ರವರೆಗೆ** ಸಂಪರ್ಕಿಸಬಹುದಾಗಿದೆ.
- **"ಸುವಿಧಾ"** ತಂತ್ರಾಂಶದ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ **ದಿನಾಂಕ: 12.08.2022 ಸಂಜೆ 5:30 ಗಂಟೆಯವರೆಗೆ.**

ವಾಸಾಸಂಇ/ವಾಪ್ರ/ಜಗದಾಳೆ ಅಡ್ವರ್ಟೈಸಿಂಗ್/–––/2022–23

ಸಹಿ/– (ವಿ.ರವಿ), ವ್ಯವಸ್ಥಾಪಕ ನಿರ್ದೇಶಕರು

**ಕೋವಿಡ್-19 - ಗಾಳಿಸುದ್ದಿ ಹರಡಬೇಡಿ, ಜವಾಬ್ದಾರಿಯಿಂದ ವರ್ತಿಸಿ, ಸೋಂಕನ್ನು ದೂರವಿಡಿ-ಸೋಂಕಿತರನ್ನಲ್ಲ.**

ಮಾಸ್ಕ್ ಧರಿಸಿ | 6 ಅಡಿ ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ